ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು: "ಖಂಡ 2 ರಿಂದ 3ವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತವೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್.ಸಿ.ಶ್ರೀಕಂಠಯ್ಯ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೇ 2000ನೇ ಸಾಲಿನ ಕರ್ನಾಟಕ ಸ್ಟ್ಯಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2000ನೇ ಸಾಲಿನ ಕರ್ನಾಟಕ ಸ್ಟ್ಯಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿದಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(iv) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2000)

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಆರ್.ಸಗೀರ್ ಅಹಮದ್ (ಸಾರಿಗೆ ಸಚಿವರು): ಮಾನ್ಯ ಅಧ್ಯಕ್ಷರೆ, 2000ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2000ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 5ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 5ವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತವೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು

(ಖಂಡ 2ರಿಂದ 5ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿ.ಆರ್.ಸಗೀರ್ ಅಹಮದ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ ೀ 2000ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿದಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಮಾನ್ಯ ವಿರೋಧ ಪಕ್ಷದ ಸದಸ್ಯರು ಒಂದು ಗಂಟೆಯೊಳಗೆ ಒಂದು ಗಂಟೆಗೆ ಇನ್ನೂ ಐದು ನಿಮಿಷಕ್ಕೆ ಮೊದಲೇ ಫೈನಾನ್ಸಿಯಲ್ ಬಿಲ್‌ಗಳಿಗೆಲ್ಲ ಅಂಗೀಕಾರ ಮಾಡಿಕೊಟ್ಟಿದ್ದಕ್ಕೆ ಅವರಿಗೆ ಮತ್ತು ಎಲ್ಲ ಇತ್ತ ಕಡೆಯ ಸದಸ್ಯರುಗಳಿಗೆ ಮತ್ತು ತಮಗೂ ಸಹ ವಂದನೆಗಳನ್ನು ಅರ್ಪಿಸುತ್ತೇನೆ. ಮಧ್ಯಾಹ್ನ ಸಪ್ಲಿಮೆಂಟರಿ ಎಸ್ಟಿಮೇಟ್ಸ್ ಬಿಲ್ ಇದೆ. ಈಗ ಸಭೆಯನ್ನು ಮುಂದೂಡಲಾಗಿದ್ದು ಪುನಃ 2 ಗಂಟೆಗೆ ನಾವು ಸೇರುತ್ತೇವೆ.

(12 ಗಂಟೆ 56 ನಿಮಿಷಕ್ಕೆ ಸದನ ಮುಕ್ತಾಯಗೊಂಡಿತು)